ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಅಂಗನವಾಡಿ ಕೇಂದ್ರಗಳ ಬಗ್ಗೆ.

ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-

412(515) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಅಂಗನವಾಡಿ ಕೇಂದ್ರಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಲಾಕ್‌ಡೌನ್ ತೆರವಾದ ನಂತರ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರ ನೀಡಲಾಗುತ್ತಿದೆಯೇ; ಹಾಗೂ ಅಂಗನವಾಡಿ ಕೇಂದ್ರಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿವೆಯೇ ಇಲ್ಲವಾದಲ್ಲಿ ಕಾರಣಗಳೇನು; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ; ಸ್ವಂತ ಕಟ್ಟಡ ಹೊಂದಲು ಇರುವ ತೊಂದರೆ ಏನು? (ತಾಲ್ಲೂಕುವಾರು ಮಾಹಿತಿ ನೀಡುವುದು)